ಇ) ಹಾಗಿದ್ದಲ್ಲಿ, ಚಿಕ್ಕಬಳ್ಳಾಪುರವನ್ನು ಸರ್. ಎಂ. ವಿಶ್ವೇಶ್ವರಯ್ಯ ಜಿಲ್ಲೆಯೆಂದು ಘೋಷಣೆ ಮಾಡುವ ವಿಚಾರದ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಳ್ಳುತ್ತದೆ ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) ರಾಜ್ಯದಲ್ಲಿನ ಜಿಲ್ಲೆಗಳನ್ನು ಪುನರ್ ರಚನೆ ಮಾಡುವ ಸಂಬಂಧ ಸಾಧಕಬಾಧಕಗಳನ್ನು ಪರಿಶೀಲಿಸಲು ಈ ಕೆಳಕಂಡ ಮೂರು ಸಮಿತಿಗಳನ್ನು ನೇಮಿಸಲಾಗಿತ್ತು.

1) ಶ್ರೀ ವಾಸುದೇವರಾವ್ ಆಯೋಗ

2) ಶ್ರೀ ಹುಂಡೇಕರ್ ಸಮಿತಿ

3) ಶ್ರೀ ಗದ್ದಿಗೌಡರ್ ಸಮಿತಿ

ಈ ಮೂರು ಸಮಿತಿಗಳ ವರದಿಯಲ್ಲಿ ಚಿಕ್ಕಬಳ್ಳಾಪುರ ಉಪ ವಿಭಾಗವನ್ನು ಜಿಲ್ಲೆಯನ್ನಾಗಿ ಪರಿವರ್ತಿಸಿ, ಶ್ರೀ ಸರ್. ಎಂ. ವಿಶ್ವೇಶ್ವರಯ್ಯ ನವರ ಹೆಸರಿನಿಂದ ಜಿಲ್ಲೆಯನ್ನಾಗಿ ಮಾಡುವ ಬಗ್ಗೆ ಶಿಫಾರಸ್ಸು ಮಾಡಿರುವುದಿಲ್ಲ. ಈ ಸಂಬಂಧ ಚಿಕ್ಕಬಳ್ಳಾಪುರವನ್ನು ಜಿಲ್ಲೆಯನ್ನಾಗಿ ಪರಿವರ್ತಿಸಿ, ಶ್ರೀ ಸರ್. ಎಂ. ವಿಶ್ವೇಶ್ವರಯ್ಯನವರ ಹೆಸರಿಡುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

ಆ) ಮತ್ತು ಇ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

775 (1200) ಶ್ರೀ ಮುನಿಯಪ್ಪ ಎಸ್.ಎಂ ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಉಪ ವಿಭಾಗ ಕೇಂದ್ರದಲ್ಲಿ 100 ವರ್ಷಗಳಿಗೂ ಹಳೆಯದಾಗಿರುವ ಶಿಥಿಲಾವಸ್ಥೆಯಲ್ಲಿರುವ ತಾಲ್ಲೂಕು ಕಛೇರಿ ಕಟ್ಟಡ ಇರುವುದು ನಿಜವಲ್ಲವೇ ;

ಆ) ಈ ಉಪ ವಿಭಾಗಕ್ಕೆ ಸೇರಿದ ಗೌರಿಬಿದನೂರು, ಬಾಗೇಪಲ್ಲಿ, ಚಿಂತಾಮಣಿ, ಶಿಡ್ಲಘಟ್ಟ ತಾಲ್ಲೂಕು ಕೇಂದ್ರಗಳಲ್ಲಿ ಮಿನಿ ವಿಧಾನಸೌಧ ಈಗಾಗಲೇ ನಿರ್ಮಾಣಗೊಂಡಿದ್ದು, ಚಿಕ್ಕಬಳ್ಳಾಪುರದಲ್ಲಿ ಮಿನಿ ವಿಧಾನಸೌಧ ಇಲ್ಲದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಈಗಾಗಲೇ ಅನೇಕ ಬಾರಿ ಸರ್ಕಾರದ ಗಮನಕ್ಕೆ ತಂದಿದ್ದರೂ ಸರ್ಕಾರ ಈ ಬಗ್ಗೆ ಗಮನಹರಿಸದಿರಲು ಕಾರಣವೇನು ;

ಈ) ಸರ್ಕಾರ ಈಗಲಾದರೂ, ಚಿಕ್ಕಬಳ್ಳಾಪುರದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದೇ ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) ಹೌದು

ಆ) ಸರ್ಕಾರದ ಗಮನಕ್ಕೆ ಬಂದಿದೆ.

ಇ) ಸರ್ಕಾರವು ಎಲ್ಲಾ ಜಿಲ್ಲಾ ಮತ್ತು ತಾಲ್ಲುಕು ಕೇಂದ್ರಗಳಲ್ಲಿ ಹಂತ ಹಂತವಾಗಿ ಮಿನಿ ವಿಧಾನಸೌಧಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಿದೆ.

ಈ) ಅನುದಾನದ ಲಭ್ಯತೆಯನ್ನು ಆಧರಿಸಿ ಚಿಕ್ಕಬಳ್ಳಾಪುರದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು.

778 (381) ಶ್ರೀಮತಿ ಪರಿಮಳ ಕೆ.ಎಸ್. (ಹನೂರು) (ವಿಧಾನಸಭಾ ಸದಸ್ಯರು): ಮಾನ್ಯ ಯೋಜನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಡಾ: ನಂಜುಂಡಪ್ಪ ವರದಿ ಪ್ರಕಾರ ಕೊಳ್ಳೇಗಾಲ ತಾಲ್ಲೂಕು ಅತ್ಯಂತ ಹಿಂದುಳಿದ ತಾಲ್ಲೂಕು ಎಂದು ಪರಿಗಣಿಸಲ್ಪಟ್ಟಿದೆಯೇ ;

ಆ) ಹಾಗಿದ್ದಲ್ಲಿ, ಈ ತಾಲ್ಲೂಕಿಗೆ ಹಮ್ಮಿಕೊಂಡಿರುವ ವಿಶೇಷ ಕಾರ್ಯಕ್ರಮಗಳೇನು ;

ಇ) ಸರ್ಕಾರ ಇದಕ್ಕಾಗಿ ಒದಗಿಸಿರುವ ಅನುದಾನವೆಷ್ಟು ?

ಶ್ರೀ ರಾಮಚಂದ್ರಗೌಡ (ಯೋಜನಾ ಸಚಿವರು):

ಅ) ಕೊಳ್ಳೇಗಾಲ ತಾಲ್ಲೂಕು ಅತ್ಯಂತ ಹಿಂದುಳಿದ ತಾಲ್ಲೂಕುಗಳ ಪೈಕಿ ಒಂದು ಎಂದು ಪರಿಗಣಿಸಲಾಗಿದೆ.

ಆ) ಪ್ರಾದೇಶಿಕ ಅಸಮತೋಲನ ನಿವಾರಣ ಉನ್ನತಾಧಿಕಾರ ಸಮಿತಿಯು 114 ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದ, ಅತೀ ಹಿಂದುಳಿದ ಹಾಗೂ ಹಿಂದುಳಿದ ತಾಲ್ಲೂಕುಗಳೆಂದು ಗುರುತಿಸಿ ಈ ತಾಲ್ಲೂಕುಗಳ ಅಭಿವೃದ್ಧಿಗೆ 16 ಸಾವಿರ ಕೋಟಿ ರೂ.ಗಳ ವಿಶೇಷ ಅಭಿವೃದ್ಧಿ ಯೋಜನೆಯನ್ನು ಸಿದ್ಧ ಪಡಿಸಲು ಶಿಫಾರಸ್ಸು ಮಾಡಿದೆ. ಉತ್ತರ ಕರ್ನಾಟಕದ ಪ್ರದೇಶಕ್ಕೆ ಬೇಕಾಗಿರುವ ಹಣವು 9600 ಕೋಟಿ ರೂ.ಗಳು ಇದರ ಪೈಕಿ ಶೇಕಡ 50ರಷ್ಟು ಹಣವನ್ನು ಒದಗಿಸಲು ಕೇಂದ್ರ ಸರ್ಕಾರಕ್ಕೆ ಕೋರಲಾಗಿದೆ. ಇದರ ಬಗ್ಗೆ ಭಾರತ ಸರ್ಕಾರದಿಂದ ಉತ್ತರವನ್ನು ನಿರೀಕ್ಷಿಸಲಾಗಿದೆ. ಆದರೂ ಈ ತಾಲ್ಲೂಕುಗಳ ಅಭಿವೃದ್ಧಿಗೆ ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆಗಳಿಂದ ಹಣವನ್ನು ಒದಗಿಸಲಾಗುತ್ತಿದೆ.

ಇ) ವಿವಿಧ ಅಭಿವೃದ್ಧಿ ಇಲಾಖೆಗಳ ಮೂಲಕ ರಾಜ್ಯ ಹಾಗೂ ಜಿಲ್ಲಾ ವಲಯ ಯೋಜನೆಗಳಡಿ ಹಣವನ್ನು ಒದಗಿಸಲಾಗುತ್ತಿದೆ.

779 (1111) ಶ್ರೀ ಬಿ.ಆರ್. ಪಾಟೀಲ್ (ಆಳಂದ್): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುದುರೆಮುಖ ದಿನಗೂಲಿ ನೌಕರರ ಪುನರ್ವಸತಿ ಬಗ್ಗೆ ಸರ್ಕಾರ ಯಾವ ಯೋಜನೆ ಹಾಕಿಕೊಂಡಿದೆ ;

ಆ) ಪುನರ್ವಸತಿ ಕಾರ್ಯ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರದ ನಿರ್ದಿಷ್ಟವಾದ ನಿಲುವೇನು ?